## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ॥ ಗಮೇಸ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಪಿ.ಡಿ. ಕೋಟೆ ಗ್ರಾಮದ ಹತ್ತಿರ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣಾ ನೀಡುವ ಬಗ್ಗೆ.

ಓದಲಾಗಿದೆ: 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ,ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 241.

2. ದಿನಾಂಕ: 10.12.2015 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿ.

* * *

**ಪ್ರಸ್ತಾವನೆ :-**

ಮೆ॥ ಗಮೇಸ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಪಿ.ಡಿ. ಕೋಟೆ ಗ್ರಾಮದ ಹತ್ತಿರ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು IPP Categoryಯಡಿ ಸ್ಥಾಪಿಸಿ, ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಏಕ ಕಡತ ಪದ್ಧತಿಯಡಿ ಮೇಲೆ ಓದಲಾದ (1) ರ ಕಡತದಲ್ಲಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ವಿವರ | : | ಜಿಲ್ಲೆ : ಚಿತ್ರದುರ್ಗ<br>ತಾಲ್ಲೂಕು : ಹಿರಿಯೂರು<br>ಗ್ರಾಮ : ಪಿ.ಡಿ. ಕೋಟೆ |
| ಯೋಜನಾ ಜಮೀನಿನ ವಿವರ | : | ಖಾಸಗಿ ಜಮೀನು |
| ಯೋಜನಾ ಪ್ರದೇಶದ ಸಮೀಪವಿರುವ ಸಬ್ ಸ್ಟೇಷನ್ | : | ಪಿ.ಡಿ. ಕೋಟೆ |
| ಕಂಪನಿಯ ಶಾಶ್ವತ ಆದಾಯ ತೆರಿಗೆ ಪಾವತಿ ಖಾತೆ ಸಂಖ್ಯೆ | : | AACCG6027C |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಮೂರನೇ ವ್ಯಕ್ತಿಗೆ ಮಾರಾಟ ಮಾಡಲು |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ. | : | ಅರ್ಜಿ ನೋಂದಣಿ ಶುಲ್ಕ ಪಾವತಿಸಿದೆ |
| ಕಂಪನಿಯ ನೆಟ್ ವರ್ತ್ | : | ರೂ 1,200 ಕೋಟಿಗಳು |

ಮೆ॥ ಗಮೇಸ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಪಿ.ಡಿ. ಕೋಟೆ ಗ್ರಾಮದ ಹತ್ತಿರ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು IPP Category ಯಡಿ ಸ್ಥಾಪಿಸಿ, ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಗೆ ನಿರಾಕ್ಷೇಪಣೆಯನ್ನು ನೀಡುವ ಕುರಿತು ಮೇಲೆ ಓದಲಾದ (2) ರಂತೆ ದಿನಾಂಕ: 10.12.2015 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ. ಸದರಿ ಶಿಫಾರಸ್ಸಿನಂತೆ ಪ್ರಸ್ತಾವನೆಯನ್ನು ಅನುಮೋದಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 374 ಎನ್‌ಸಿಇ 2016,**

**ಬೆಂಗಳೂರು, ದಿನಾಂಕ: 28.12.2016.**

ಮೆ॥ ಗಮೇಸ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಪಿ.ಡಿ. ಕೋಟೆ ಗ್ರಾಮದ ಹತ್ತಿರ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಿ,

...2)

IPP Category ಅಡಿ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ **ನಿರಾಕ್ಷೇಪಣೆಯನ್ನು** ನೀಡಲಾಗಿದೆ.

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;
2. ಮೆ॥ ಗಮೇಸ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ರವರು ಸೌರ ನೀತಿ 2014-21 ರನ್ವಯ ಈ ಬಾಬ್ತು ಅನ್ವಯಿಸುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
3. ಪ್ರಸ್ತಾಪಿತ ಸೋಲಾರ್ ಘಟಕದಿಂದ ಉತ್ಪತ್ತಿಯಾಗುವ ವಿದ್ಯುತ್ತನ್ನು IPP Category ಅಡಿ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಹಾಗೂ ಈ ಸಂಬಂಧ ಅಗತ್ಯವಿರುವ ವಿದ್ಯುತ್ ಜಾಲಕ್ಕೆ ಜೋಡಣೆ ಮಾಡಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ವೀಲಿಂಗ್ ಮತ್ತು ಬ್ಯಾಂಕಿಂಗ್ ಒಪ್ಪಂದ ಮಾಡಿಕೊಳ್ಳಲು ಅನುಮತಿಸಿದೆ;
4. ಮೆ॥ ಗಮೇಸ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ರವರು ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
5. ಮೆ॥ ಗಮೇಸ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ರವರು ಸ್ಥಾಪಿಸುತ್ತಿರುವ ಈ ಸೌರ ವಿದ್ಯುತ್ ಘಟಕಕ್ಕೆ ಸರ್ಕಾರದ 2014-21 ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ.
6. ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಆದೇಶ ಹೊರಡಿಸಿದ ದಿನಾಂಕದಿಂದ 18 ತಿಂಗಳೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ವಿಶ್ವನಾಥ ಪಿ. ಹಿರೇಮಠ),**
ಸರ್ಕಾರದ ಉಪ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**

ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
6 ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
8 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.
9 M/s Gamesa Wind Turbines Pvt. Ltd., No. 334, futura IT Park, Block, 8th floor, Old Mahabalipuram Road, Shollinganallur, Chennai-600119.
10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.